**ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣ ವಚನ ಮಾಡಿಸಲಾಯಿತು.**

ದಿ:24-02-2025

**ಮುಂದುವರೆದ ಮುಖ್ಯ ವಿಚಾರಣೆ: ಮಾನ್ಯ ಎ ಪಿ ಪಿ ಯವರಿಂದ.**

***(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ ಸ ಅ ಅವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)***

**ಪಾಟೀ ಸವಾಲು: ಮಾನ್ಯ ಎ ಪಿ ಪಿ ಯವರಿಂದ.**

ನಾನು ಹೇಳಿಕೆಯಲ್ಲಿ ನಾನು 9 ನೇ ತರಗತಿವರೆವಿಗೂ ಪನ್ನಮಜ್ಜ ದಲ್ಲಿನ ಶಾಲೆಯಲ್ಲಿ ಓದುತ್ತಿದ್ದು, ಶಾಲೆಯನ್ನು ಬಿಟ್ಟು ನನ್ನ ಅಜ್ಜಿ ಮನೆಗೆ ಬಂದಿರುತ್ತೇನೆ ಎಂದು ಬರೆಸಿರುತ್ತೇನೆ ಎಂದರೆ ಸರಿಯಲ್ಲ. ನನ್ನ ದೂರಿನಲ್ಲಿ ನನ್ನ ಹೇಳಿಕೆಯಲ್ಲಿ 1ನೇ ಆರೋಪಿಯನ್ನು ಇಷ್ಟಪಡುತ್ತಿದ್ದೆ ಎಂದು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಮದುವೆಯಾಗಬೇಕೆಂದು ನಮ್ಮ ಪೋಷಕರಿಗೆ ತಿಳಿಸಿದ್ದು ಆ ಪ್ರಕಾರ ದಿ: 06-06-2021 ರಂದು ಇರುದಿ ಗ್ರಾಮದ ಚಾಮುಂಡಿ ದೇವಾಲಯದಲ್ಲಿ 1ನೇ ಆರೋಪಿಯೊಂದಿಗೆ ಮದುವೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಮದುವೆಯನ್ನು 3 ರಿಂದ 5 ನೇ ಆರೋಪಿತರು ಸೇರಿಕೊಂಡು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಮದುವೆಯಾದ ನಂತರ ನಾನು ಮತ್ತು 1ನೇ ಆರೋಪಿ ನಮ್ಮ ಅಜ್ಜಿಯ ಮನೆಯಲ್ಲಿ ವಾಸವಿದ್ದೆವು ಎಂದರೆ ಸರಿಯಲ್ಲ. ನಾನು ಮತ್ತು 1ನೇ ಆರೋಪಿ ಪರಸ್ಪರ ಒಪ್ಪಿಗೆಯ ಮೇರೆಗೆ ಲೈಂಗಿಕ ಸಂಪರ್ಕ ಮಾಡಿರುತ್ತೇವೆ ಎಂದರೆ ಸರಿಯಲ್ಲ. ದಿ: 30-06-2021 ರಂದು ಚಾಸಾ-4 ರವರು ಚೈಲ್ಡ್ ಲೇನ್ ಪ್ರಚೋದನಾ ಸಂಸ್ಥೆಗೆ ಕರೆದುಕೊಂಡು ಬಂದಿರುತ್ತಾರೆ ಎಂದರೆ ಸರಿಯಲ್ಲ. ನಾನು ಈಗ ಓದಿ ಹೇಳಿದಂತೆ ನಾನು

ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಒಪ್ಪಿಕೊಳ್ಳದ ಹೇಳಿಕೆ ಭಾಗವನ್ನು ನಿಪಿ-10 ಎಂದು ಗುರುತಿಸಲಾಯಿತು. ನಿಪಿ-2 ಕ್ಕೆ ನಾನು ಸ್ಥಳದಲ್ಲೇ ಸಹಿ ಮಾಡಿರುತ್ತೇನೆ ಎಂದರೆ ಸಾಕ್ಷಿ ಬಲವಂತವಾಗಿ ಸಹಿ ಪಡೆದಿರುತ್ತಾರೆ ಎಂದು ನುಡಿಯುತ್ತಾರೆ. ನಾನು ನ್ಯಾಯಾಲಯದಲ್ಲೂ ಸಹ ಹೇಳಿಕೆ ನೀಡಿರುತ್ತೇನೆ ಎಂದರೆ ಸಾಕ್ಷಿ ಪೋಲೀಸರು ಹೇಳಿಕೊಟ್ಟಿರುತ್ತಾರೆ ಎಂದು ನುಡಿಯುತ್ತಾರೆ. ಬಾಲ್ಯ ವಿವಾಹ ಗೊತ್ತಾಗುತ್ತದೆ ಎಂಬ ಉದ್ದೇಶದಿಂದ ವೈದ್ಯಕೀಯ ಪರೀಕ್ಷೆಗೆ ಸಮ್ಮತಿ ನೀಡಿರುವುದಿಲ್ಲ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ ಇಲ್ಲ**

**ಮರು ವಿಚಾರಣೆಃ ಇಲ್ಲ**

ಉಕ್ತ ಲೇಖನದಂತೆ ಮುಕ್ತ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

**ಓ ಹೆ ಕೇ ಸ ಇ**

**ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ ಸಕಲೇಶಪುರ**